4ನೇ ಹಂತ		
1	ಮಂದಕನಳ್ಳಿ	ಗ್ರಾಮಗಳ ಗ್ರಾಮಾಭ್ಯವೃದ್ಧಿ ಯೋಜನೆಗಳನ್ನು ತಯಾರಿಸುವ ಪ್ರಕ್ರಿಯೆ ಜಾರಿಯಲ್ಲಿದೆ. ಆದಷ್ಟು ಶೀಘ್ರವಾಗಿ ಗ್ರಾಮಗಳ ಗ್ರಾಮಾಭ್ಯವೃದ್ಧಿ ಯೋಜನೆಗಳನ್ನು ಮತ್ತು ಅಂದಾಜು ಪತ್ರಿಕೆಗಳನ್ನು ತಯಾರಿಸಿ, ಆಡಳಿತಾತ್ಮಕ ಅನುಮೋದನೆ ನೀಡಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.
2	ಅಪ್ಪೂರ	
3	ಯಾಕತಪೂರ	
4	ಘೋಡಂಪಳ್ಳಿ	
5	ಬೆಳ್ಳೂರ	
6	ಸಾತೋಳಿ	
7	ಹೊನ್ನಡಿ	
8	ಮಿರ್ಜಾಪುರ(ಎಂ)	
9	ಚೌಂಡಿ	
10	ಹೋಚಕನಹಳ್ಳಿ	
11	ಚಾಂಬೊಳ	
12	ಯರನಳ್ಳಿ	
13	ಹಮಿಲಾಪೂರ	
14	ಶ್ರೀಮಂಡಲ	

ಜೂನಿಯರ್ ಕಾಲೇಜಿನ ಉಪನ್ಯಾಸಕರುಗಳಿಗೆ ವೇತನ ತಾರತಮ್ಯ

522 (93) ಶ್ರೀ ರಾಜು ಕೆ. (ರಾಮನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕರಿಗೂ ಮತ್ತು ಜ್ಯೂನಿಯರ್ ಕಾಲೇಜಿನ ಉಪನ್ಯಾಸಕರುಗಳಿಗೂ ವೇತನದಲ್ಲಿ ತಾರತಮ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ತಾರತಮ್ಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಜ್ಯೂನಿಯರ್ ಕಾಲೇಜುಗಳು ಉಪನ್ಯಾಸಕರುಗಳಿಗೆ ಈಗ ನೀಡುತ್ತಿರುವ ವೇತನವನ್ನು ಪರಿಷ್ಕರಿಸಿ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಯಾವಾಗ ಮತ್ತು ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು (ವಿವರ ನೀಡುವುದು)?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಪದವಿ ಕಾಲೇಜುಗಳ ಉಪನ್ಯಾಸಕರು ಯು.ಜಿ.ಸಿ. ವೇತನ ಶ್ರೇಣಿ ಪಡೆಯುತ್ತಿದ್ದಾರೆ. ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ರಾಜ್ಯ ವೇತನಶ್ರೇಣಿಗಳನ್ನು ಪಡೆಯುತ್ತಿದ್ದಾರೆ. ಎರಡು ವರ್ಗದ ಉಪನ್ಯಾಸಕರು ಪ್ರತ್ಯೇಕವಾದ ವೇತನ ಶ್ರೇಣಿಗಳನ್ನು ಪಡೆಯುತ್ತಿರುವುದರಿಂದ, ವೇತನ ತಾರತಮ್ಯದ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಖಾಸಗಿ ಅನುದಾನಿತ ಪ್ರೌಢ ಶಾಲೆಯ ಖಾಲಿ ಹುದ್ದೆ ಭರ್ತಿ

523 (228) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಖಾಸಗಿ ಅನುದಾನಿತ ಪ್ರೌಢಶಾಲೆಗಳೆಷ್ಟು;

ಆ) ಈ ಶಾಲೆಗಳಲ್ಲಿ ಖಾಲಿ ಇರತಕ್ಕ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು;

ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿ ಒಟ್ಟು 3325 ಖಾಸಗಿ ಅನುದಾನಿತ ಪ್ರೌಢಶಾಲೆಗಳು ಇರುತ್ತವೆ.

ಆ) 4703 ಬೋಧಕ ಹುದ್ದೆಗಳು ಖಾಲಿ ಇರುತ್ತವೆ.

ಇ) ಸರ್ಕಾರದ ಆದೇಶ ಸಂಖ್ಯೆ: ಇಡಿ 77 ಎಸ್‌ಇಪಿ 2007 (ಭಾಗ); ದಿ: 31.03.2008ರ ಆದೇಶದಲ್ಲಿ ಈಗಾಗಲೇ ಆರ್ಥಿಕ ಮಿತವ್ಯಯ ಆದೇಶ ಸಡಿಲಿಸಿ ಅನುಮತಿ ನೀಡಿರುವ 2285 ಹುದ್ದೆಗಳಲ್ಲಿ ಬಾಕಿ ಇರುವ 1130 ಹುದ್ದೆಗಳನ್ನು 2009–10ನೇ ಸಾಲಿನಲ್ಲಿ ಭರ್ತಿ ಮಾಡಲು ಹಾಗೂ